ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದವರು ಕಾರ್ಯನಿರ್ವಹಿಸುತ್ತಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

07 (72) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಅಕ್ಷರ ದಾಸೋಹ ಕಾರ್ಯಕ್ರಮ ಯೋಜನೆ ನಿರ್ವಹಣೆಗೆ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದವರು ಕಾರ್ಯನಿರ್ವಹಿಸುತ್ತಿದ್ದು; ಈ ಹುದ್ದೆಯು ಬೋಧಕೇತರ ನೌಕರರ ಹುದ್ದೆಯಾಗಿದ್ದು ಈ ಸಂಬಂಧ ಧಾರವಾಡ ಉಚ್ಚ ನ್ಯಾಯಾಲಯದಲ್ಲಿ ಆದೇಶವಾಗಿದ್ದು ಈ ಬಗ್ಗೆ ಈವರೆವಿಗೂ ಇಲಾಖೆಯವತಿಯಿಂದ ಯಾವುದೇ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು; (ಸೂಕ್ತ ದಾಖಲೆಗಳೊಂದಿಗೆ ಮಾಹಿತಿ ನೀಡುವುದು)

(ಆ) ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಹಂತದ ಕಛೇರಿಗಳಲ್ಲಿ ನ್ಯಾಯಾಲಯ ಪ್ರಕರಣಗಳ ಸಂಖ್ಯೆ ಸಾಕಷ್ಟಿದ್ದು, ಜಿಲ್ಲಾ ಹಂತದಲ್ಲಿ ಒಂದು Legal Advisor ಹುದ್ದೆ ಮಂಜೂರು ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ ಈ ಹುದ್ದೆ ಮಂಜೂರಾತಿ ಯಾವಾಗ ಆಗುವುದು;

(ಇ) ಹೊಸ ಪಿಂಚಣಿ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಜಾರಿಗೊಳಿಸುವ ಸಂಬಂಧ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ, ಯಾವ ಹಂತದಲ್ಲಿದೆ; ಈ ಬಗ್ಗೆ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು)